**All India Radio: Bangalore**
**National Bulletins In Kannada**
**21.07.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.07.2025 / 19.35 hrs**

**<><*<><>*><>**

ಮುಖ್ಯಾಂಶಗಳು

- ಪಹಲ್ಗಾಮ್ ದಾಳಿ ಕುರಿತ ಚರ್ಚೆಗೆ ಆಗ್ರಹಿಸಿ ಪ್ರತಿಪಕ್ಷಗಳ ಗದ್ದಲ ಹಿನ್ನೆಲೆ; ಸಂಸತ್ತಿನ ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ

- ಬಾಂಗ್ಲಾ ವಾಯುಪಡೆಯ ತರಬೇತಿ ಯುದ್ಧ ವಿಮಾನ ಡಾಕಾದ ಕಾಲೇಜು ಕ್ಯಾಂಪಸ್‌ನಲ್ಲಿ ಪತನ; ೧೯ ಮಂದಿ ಸಾವು, ೧೦೦ ಕ್ಕೂ ಹೆಚ್ಚು ಜನರಿಗೆ ಗಾಯ

- ಕಮ್ಯುನಿಸ್ಟ್ ಪಕ್ಷದ ಹಿರಿಯ ನಾಯಕ, ಕೇರಳ ಮಾಜಿ ಮುಖ್ಯಮಂತ್ರಿ ವಿ.ಎಸ್.ಅಚ್ಯುತಾನಂದನ್ ವಿಧಿವಶ

- ಸ್ಕ್ವಾಷ್ ಚಾಂಪಿಯನ್‌ಶಿಪ್; ಭಾರತ ನಾಲ್ವರು ಕ್ರೀಡಾಪಟುಗಳು ೬೪ ರ ಸುತ್ತಿಗೆ ಮುನ್ನಡೆ

**<><*<><>*><>**

ಸಂಸತ್ತಿನ ಉಭಯ ಸದನಗಳ ಕಲಾಪವನ್ನು ವಿರೋಧ ಪಕ್ಷಗಳ ಗದ್ದಲದ ಹಿನ್ನೆಲೆಯಲ್ಲಿ ನಾಳೆಗೆ ಮುಂದೂಡಲಾಗಿದೆ. ಲೋಕಸಭೆಯಲ್ಲಿಂದು ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು 'ಆಪರೇಷನ್ ಸಿಂದೂರ್' ಕುರಿತ ಚರ್ಚೆಗೆ ಪ್ರತಿಪಕ್ಷ ನಾಯಕರು ಒತ್ತಾಯಿಸಿದರು. ಮೂರು ಬಾರಿ ಮುಂದೂಡಿಕೆಯ ಬಳಿಕ ಸಂಜೆ ಸದನ ಸೇರುತ್ತಿದ್ದಂತೆಯೇ ಕಾಂಗ್ರೆಸ್, ಡಿಎಂಕೆ, ಸಮಾಜವಾದಿ ಪಕ್ಷದ ಸದಸ್ಯರು ಘೋಷಣೆ ಕೂಗಿದರು. ಬಳಿಕ ಸದನದಲ್ಲಿ ಗದ್ದಲದ ವಾತಾವರಣ ನಿರ್ಮಾಣವಾದ ಹಿನ್ನೆಲೆಯಲ್ಲಿ ಕಲಾಪವನ್ನು ನಾಳೆಗೆ ಮುಂದೂಡಲಾಯಿತು. ವಿರೋಧ ಪಕ್ಷದ ಸದಸ್ಯರು, ಶೂನ್ಯ ವೇಳೆಯಲ್ಲಿ ಭಾಗವಹಿಸುವಂತೆ ಸಭಾಧ್ಯಕ್ಷರು ಪದೇ ಪದೇ ಮನವಿ ಮಾಡಿದರು. ಮಧ್ಯ ಪ್ರವೇಶಿಸಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸರ್ಕಾರ ಚರ್ಚೆಗೆ ಸಿದ್ಧವಾಗಿದೆ ಎಂದು ಹೇಳಿದರು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೂಡ ಸರ್ಕಾರ ಚರ್ಚೆಗೆ ಸಿದ್ಧವಾಗಿದೆ ಎಂದರು. ಆದರೂ, ವಿರೋಧ ಪಕ್ಷದ ಸದಸ್ಯರು ತಮ್ಮ ಘೋಷಣೆಗಳನ್ನು ಮುಂದುವರೆಸಿದರು. ಇದಕ್ಕೂ ಮೊದಲು, ಲೋಕಸಭೆಯಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರಿಗೆ ಹಾಗೂ ಏರ್ ಇಂಡಿಯಾ ವಿಮಾನ ದುರಂತದಲ್ಲಿ ಸಾವನ್ನಪ್ಪಿದವರಿಗೆ ಸಂತಾಪ ಸೂಚಿಸಲಾಯಿತು. ನಂತರ

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣಿಸಿದ ಭಾರತದ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಹಾಗೂ ಇಸ್ರೋ ಸಾಧನೆ ಬಗ್ಗೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅಭಿನಂದನೆ ಸಲ್ಲಿಸಿದರು.

<><*<><>*><>

ನ್ಯಾಯಮೂರ್ತಿ ಯಶವಂತ್ ವರ್ಮಾ ಅವರನ್ನು ಪದಚ್ಯುತಗೊಳಿಸುವಂತೆ ಕೋರಿ ಸಂಸತ್ ಸದಸ್ಯರು ಇಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಜ್ಞಾಪಕ ಪತ್ರ ಸಲ್ಲಿಸಿದ್ದಾರೆ. ಸಂವಿಧಾನದ ೧೨೪, ೨೧೭ ಮತ್ತು ೨೧೮ ನೇ ವಿಧಿಗಳ ಅಡಿಯಲ್ಲಿ ನ್ಯಾಯಮೂರ್ತಿ ವರ್ಮಾ ವಿರುದ್ಧದ ಮಹಾಭಿಯೋಗ ನಿರ್ಣಯಕ್ಕೆ ಒಟ್ಟು ೧೪೫ ಲೋಕಸಭಾ ಸದಸ್ಯರು ಸಹಿ ಹಾಕಿದ್ದಾರೆ. ಬಿಜೆಪಿ ಸಂಸದರಾದ ಅನುರಾಗ್ ಸಿಂಗ್ ಠಾಕೂರ್, ರವಿಶಂಕರ್ ಪ್ರಸಾದ್ ಮತ್ತು ರಾಜೀವ್ ಪ್ರತಾಪ್ ರೂಡಿ, ಕಾಂಗ್ರೆಸ್ ಸಂಸದ ಮತ್ತು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಎನ್‌ಸಿಪಿ-ಎಸ್‌ಸಿಪಿಯ ಸುಪ್ರಿಯಾ ಸುಳೆ ಹಾಗೂ ಟಿಡಿಪಿ, ಜೆಡಿಯು, ಜೆಡಿಎಸ್, ಜನಸೇನಾ ಪಕ್ಷ, ಎಜಿಪಿ, ಶಿವಸೇನೆ ಶಿಂಧೆ ಮತ್ತು ಸಿಪಿಎಂ ಸೇರಿದಂತೆ ವಿವಿಧ ಪಕ್ಷಗಳ ಸಂಸದರು ಜ್ಞಾಪಕ ಪತ್ರಕ್ಕೆ ಸಹಿ ಹಾಕಿದ್ದಾರೆ. ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ನಿವಾಸದಲ್ಲಿ ನಗದು ವಶಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದ ವಿಷಯವನ್ನು ಸಂಸತ್ತು ವಿಚಾರಣೆ ನಡೆಸಲಿದೆ. ಈ ನಡುವೆ, ರಾಜ್ಯಸಭಾಧ್ಯಕ್ಷ ಜಗದೀಪ್ ಧನ್‌ಕರ್ ಇಂದು ನ್ಯಾಯಮೂರ್ತಿ ಯಶವಂತ್ ವರ್ಮಾ ಅವರನ್ನು ಪದಚ್ಯುತಗೊಳಿಸುವ ನಿರ್ಣಯಕ್ಕೆ ರಾಜ್ಯಸಭೆಯ ೫೦ ಕ್ಕೂ ಹೆಚ್ಚು ಸದಸ್ಯರು ಸಹಿ ಹಾಕಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಸರಕು ಸಾಗಣೆ ಮಸೂದೆ ೨೦೨೫ ಕ್ಕೆ ರಾಜ್ಯಸಭೆಯು ಅನುಮೋದನೆ ನೀಡುವ ಮೂಲಕ ಸಂಸತ್ತು ಈ ಮಸೂದೆಯನ್ನು ಅಂಗೀಕರಿಸಿದೆ. ಲೋಕಸಭೆಯು, ಕಳೆದ ಮಾರ್ಚ್‌ನಲ್ಲಿ ಈ ಶಾಸನವನ್ನು ಅಂಗೀಕರಿಸಿತ್ತು. ಸಾಗಣೆ ದಾಖಲೆಗಳಿಗಾಗಿ ಕಾನೂನು ಚೌಕಟ್ಟನ್ನು ನವೀಕರಿಸುವುದು ಮತ್ತು ಸರಳಗೊಳಿಸುವ ಗುರಿಯನ್ನು ಈ ಮಸೂದೆ ಹೊಂದಿದೆ. ೧೮೫೬ ರ ಭಾರತೀಯ ಸರಕು ಸಾಗಣೆ ಮಸೂದೆಗಳ ಕಾಯ್ದೆಯನ್ನು ಇದು ಮಾರ್ಪಡಿಸುತ್ತದೆ. ಈ ಮಸೂದೆಯು, ಸಾಗಿಸಲಾಗುವ ಸರಕುಗಳ ಪ್ರಕಾರ, ಪ್ರಮಾಣ, ಸ್ಥಿತಿ ಮತ್ತು ಗಮ್ಯಸ್ಥಾನ ಸೇರಿದಂತೆ ವಿವರಗಳನ್ನು ಒಳಗೊಂಡಿರಲಿದ್ದು, ಸರಕು ಸಾಗಣೆದಾರರಿಗೆ ನೀಡಲಾಗುತ್ತದೆ. ರಾಜ್ಯಸಭೆಯಲ್ಲಿ ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಬಂದರುಗಳು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್, ೨೦೧೪ ರಲ್ಲಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ, ಸಚಿವಾಲಯದ ದೂರದೃಷ್ಟಿಯ ಯೋಜನೆಯನ್ನು ಅಭಿವೃದ್ಧಿಪಡಿಸಲಾಯಿತು, ಅದರ ಅಡಿಯಲ್ಲಿ ಸಾಗರ್‌ಮಾಲಾ ಕಾರ್ಯಕ್ರಮವನ್ನು ಕೈಗೆತ್ತಿಕೊಂಡಿದ್ದು, ೫.೫ ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ೮೦೫ ಕ್ಕೂ ಹೆಚ್ಚು ಯೋಜನೆಗಳನ್ನು ಗುರುತಿಸಲಾಗಿದೆ ಎಂದು ಮಾಹಿತಿ ನೀಡಿದರು.

<><*<><>*><>

ಬಾಂಗ್ಲಾದೇಶದ ಢಾಕಾದ ಬಳಿ ವಾಯುಪಡೆಯ ತರಬೇತಿ ಯುದ್ಧ ವಿಮಾನವೊಂದು, ಕಾಲೇಜು ಕ್ಯಾಂಪಸ್‌ಗೆ ಅಪ್ಪಳಿಸಿದ ಪರಿಣಾಮ ವಿಮಾನದ ಪೈಲಟ್ ಸೇರಿದಂತೆ ಕನಿಷ್ಠ ೧೯ ಜನರು

ಸಾವನ್ನಪ್ಪಿದ್ದು, ೧೦೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಬಾಂಗ್ಲಾದೇಶ ವಾಯುಪಡೆಯ ಎಫ್‌೭ ವಿಮಾನವು ಮಧ್ಯಾಹ್ನ ೧:೩೦ ರ ಸುಮಾರಿಗೆ ಮೈಲ್‌ಸ್ಟೋನ್ ಕಾಲೇಜಿನ ಕಟ್ಟಡಕ್ಕೆ ಅಪ್ಪಳಿಸಿದೆ ಎಂದು ಢಾಕಾದ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಬಾಂಗ್ಲಾದೇಶ ಸೇನೆ ಮತ್ತು ಅಗ್ನಿಶಾಮಕ ದಳದಿಂದ ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ. ವಿಮಾನ ಅಪಘಾತದ ನಂತರ ಢಾಕಾದ ರಾಷ್ಟ್ರೀಯ ಬರ್ನ್ ಮತ್ತು ಪ್ಲಾಸ್ಟಿಕ್ ಸರ್ಜರಿ ಸಂಸ್ಥೆಯಲ್ಲಿ ತುರ್ತು ಸಹಾಯವಾಣಿ ಪ್ರಾರಂಭಿಸಲಾಗಿದೆ. ಈ ದುರ್ಘಟನೆಯ ನಂತರ ಬಾಂಗ್ಲಾದೇಶ ಸರ್ಕಾರ ಒಂದು ದಿನದ ರಾಜ್ಯ ಶೋಕಾಚರಣೆಯನ್ನು ಘೋಷಿಸಿದೆ.

<><*<><>*><>

ಕೇರಳದ ಮಾಜಿ ಮುಖ್ಯಮಂತ್ರಿ ಹಾಗೂ ಕಮ್ಯೂನಿಸ್ಟ್ ಪಕ್ಷದ ಹಿರಿಯ ನಾಯಕ ವಿ.ಎಸ್.ಅಚ್ಯುತಾನಂದನ್ ಇಂದು ತಿರುವನಂತಪುರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಅವರಿಗೆ ೧೦೧ ವರ್ಷ ವಯಸ್ಸಾಗಿತ್ತು. ಜೂನ್ ೨೩ ರಂದು ಹೃದಾಯಘಾತದಿಂದ ಖಾಸಗೀ ಆಸ್ಪತ್ರೆಗೆ ದಾಖಲಾಗಿದ್ದ ಅವರು, ಒಂದು ತಿಂಗಳಿಗೂ ಹೆಚ್ಚು ಕಾಲ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ೨೦೦೬ ರಿಂದ ೨೦೧೧ರವರೆಗೆ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು.

<><*<><>*><>

ಏರ್ ಇಂಡಿಯಾ-೧೭೧ ವಿಮಾನ ಅಪಘಾತದ ತನಿಖೆಯನ್ನು ಪಾರದರ್ಶಕ ರೀತಿಯಲ್ಲಿ ವಿಮಾನಯಾನ ಅಪಘಾತ ತನಿಖಾ ಬ್ಯೂರೋ-ಎಎಐಬಿ ನಡೆಸುತ್ತಿದೆ ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ.ರಾಮ್ ಮೋಹನ್ ನಾಯ್ಡು ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಅಂತಾರಾಷ್ಟ್ರೀಯ ತಜ್ಞರು ಮತ್ತು ಪಾಲುದಾರರ ಒಳಗೊಳ್ಳುವಿಕೆಯೊಂದಿಗೆ ಅಂತಾರಾಷ್ಟ್ರೀಯ ಮಾನದಂಡಗಳ ಪ್ರಕಾರ ಈ ಪ್ರಕ್ರಿಯೆಯನ್ನು ಕಟ್ಟುನಿಟ್ಟಾಗಿ ಕೈಗೊಳ್ಳಲಾಗುತ್ತಿದೆ ಎಂದರು. ತನಿಖೆಯ ಆರಂಭಿಕ ಹಂತ ಪೂರ್ಣಗೊಂಡಿದ್ದು, ಪ್ರಾಥಮಿಕ ವರದಿ ಸಲ್ಲಿಕೆಯಾಗಿದೆ ಎಂದು ಮಾಹಿತಿ ನೀಡಿದರು. ಭಾರತೀಯ ಮಾಧ್ಯಮ ಮಾತ್ರವಲ್ಲದೇ, ಪಾಶ್ಚಿಮಾತ್ಯ ಮಾಧ್ಯಮಗಳೂ ಕೂಡ ದುರಂತದ ಕುರಿತು ತಮ್ಮದೇ ದೃಷ್ಟಿಕೋನಗಳನ್ನು ಸಾಬೀತುಪಡಿಸಲು ಪ್ರಯತ್ನಿಸುತ್ತಿರುವ ಹಲವಾರು ಲೇಖನಗಳು ಪ್ರಕಟಗೊಂಡಿವೆ. ಆದರೆ, ಸರ್ಕಾರವು ತನಿಖೆ ಪೂರ್ಣಗೊಳಿಸಿ, ಸತ್ಯವನ್ನು ಬಹಿರಂಗಪಡಿಸುವ ಕಡೆ ಗಮನಹರಿಸಿದೆ ಎಂದು ತಿಳಿಸಿದರು.

<><*<><>*><>

ಜಮ್ಮು-ಕಾಶ್ಮೀರದ ರಿಯಾಸಿ ಜಿಲ್ಲೆಯ ವೈಷ್ಣೋ ದೇವಿ ದೇಗುಲಕ್ಕೆ ಸಂಪರ್ಕ ಕಲ್ಪಿಸುವ ಹಳೆಯ ಯಾತ್ರಾ ಮಾರ್ಗದಲ್ಲಿ ನಿನ್ನೆ ಸಂಜೆ ಸಂಭವಿಸಿದ ಭಾರೀ ಭೂಕುಸಿತದಲ್ಲಿ ಓರ್ವ ಮೃತಪಟ್ಟಿದ್ದು, ೯ ಮಂದಿ ಗಾಯಗೊಂಡಿದ್ದಾರೆ. ಗುಲ್ಶನ್ ಕಾ ಲಂಗರ್ ಬಳಿ ಭಾರೀ ಮಳೆಯಿಂದಾಗಿ ಸಂಭವಿಸಿದ ಭೂಕುಸಿತದಲ್ಲಿ ಬುಕ್ಕಿಂಗ್ ಕಚೇರಿ ಮತ್ತು ಕಬ್ಬಿಣದ ಮೇಲ್ಛಾವಣಿ ಹಾನಿಗೊಂಡಿವೆ. ರಾಜ್ಯ ವಿಪತ್ತು ನಿರ್ವಹಣಾ ಪಡೆ, ಸಿಆರ್‌ಪಿಎಫ್, ಪೊಲೀಸರು ಮತ್ತು ಸ್ಥಳೀಯ ಸ್ವಯಂ ಸೇವಕರು ರಕ್ಷಣಾ ಕಾರ್ಯದಲ್ಲಿ ನಿರತರಾಗಿದ್ದಾರೆ. ಸದ್ಯ ಯಾತ್ರೆಯನ್ನು ಸ್ಥಗಿತಗೊಳಿಸಲಾಗಿದೆ. ಘಟನೆ ಕುರಿತು

ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಸಂತಾಪ ಸೂಚಿಸಿದ್ದು, ಗಾಯಾಳುಗಳ ಆರೈಕೆಯನ್ನು ಖಚಿತಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

**<><*<><>*><>**

ಈಜಿಪ್ಟ್‌ನ ಕೈರೋದಲ್ಲಿಂದು ಆರಂಭವಾದ ವಿಶ್ವ ಜೂನಿಯರ್ ಸ್ಕ್ವಾಷ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಅನಾಹತ್ ಸಿಂಗ್, ಆರಾಧ್ಯ ಪೋರ್ವಾಲ್, ಅನಿಕಾ ದುಬೆ, ನವ್ಯಾ ಸುಂದರರಾಜನ್ ಮತ್ತು ರುದ್ರ ಸಿಂಗ್ ಅವರು ಮಹಿಳೆಯರ ಸಿಂಗಲ್ಸ್ ೬೪ ರ ಸುತ್ತಿಗೆ ಮುನ್ನಡೆದಿದ್ದಾರೆ. ಚಾಂಪಿಯನ್‌ಶಿಪ್‌ನಲ್ಲಿ ಉನ್ನತಿ ತ್ರಿಪಾಠಿ ತಮ್ಮ ಮೊದಲ ಸುತ್ತಿನ ಪಂದ್ಯದಲ್ಲಿ ಸೋಲನುಭವಿಸಿದರು. ಶನಿವಾರದವರೆಗೆ ಆರು ದಿನಗಳ ಕಾಲ ನಡೆಯುವ ಚಾಂಪಿಯನ್‌ಶಿಪ್‌ನಲ್ಲಿ ವಿಶ್ವದ ಅಗ್ರ ೧೯ ವರ್ಷದೊಳಗಿನವರ ೨೩೪ ಆಟಗಾರ್ತಿಯರು ಭಾಗವಹಿಸಲಿದ್ದಾರೆ.

**<><*<><>*><>**

ಮುಂಬೈ ವಿಮಾನ ನಿಲ್ದಾಣದಲ್ಲಿ ಭಾರೀ ಮಳೆಯ ನಡುವೆ ಇಂದು ಕೊಚ್ಚಿ, ಮುಂಬೈ ಏರ್ ಇಂಡಿಯಾ ವಿಮಾನ ರನ್‌ವೇಯಿಂದ ಜಾರಿದೆ. ವಿಮಾನವು ಕೊಚ್ಚಿಯಿಂದ ಮುಂಬೈಗೆ ಪ್ರಯಾಣಿಸುತ್ತಿತ್ತು. ಪ್ರಾಥಮಿಕ ವರದಿಗಳ ಪ್ರಕಾರ, ಹವಾಮಾನ ವೈಪರಿತ್ಯದಿಂದಾಗಿ ವಿಮಾನವು ಲ್ಯಾಂಡಿಂಗ್ ಮಾಡಿದ ಸ್ವಲ್ಪ ಹೊತ್ತಿನಲ್ಲಿ ರನ್‌ವೇಯಿಂದ ಹೊರಗೆ ಜಾರಿದೆ. ಇದೇ ಸಮಯದಲ್ಲಿ ವಿಮಾನದ ಮೂರು ಟೈಯರ್‌ಗಳು ಸಿಡಿದಿದ್ದು, ಎಂಜಿನ್ ಹಾನಿಗೊಳಗಾಗಿರುಬಹುದು ಎಂದು ಮೂಲಗಳು ತಿಳಿಸಿವೆ. ಆದಾಗ್ಯೂ ವಿಮಾನವನ್ನು ಟರ್ಮಿನಲ್ ಗೇಟ್‌ಗೆ ಸುರಕ್ಷಿತವಾಗಿ ಎಳೆದು ತಂದು, ಪ್ರಯಾಣಿಕರು ಮತ್ತು ಸಿಬ್ಬಂದಿಯನ್ನು ರಕ್ಷಿಸಲಾಯಿತು. ಘಟನೆಯನ್ನು ಏರ್ ಇಂಡಿಯಾ ದೃಢಪಡಿಸಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**